**All India Radio: Bangalore**
**National Bulletin In Kannada**
**19.01.2025 19.35 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ನವೋದ್ಯಮಗಳ ಕೇಂದ್ರಗಳಾಗಿ ಬದಲಾಗುತ್ತಿರುವ ದೇಶದ ನಗರಗಳು ; ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ
2. ಹಮಾಸ್ ಜೊತೆಗಿನ ಕದನ ವಿರಾಮ ಒಪ್ಪಂದಕ್ಕೆ ಇಸ್ರೇಲ್ ತಡೆ
3. ಇಂದು ಎನ್‌ಡಿಆರ್‌ಎಫ್ ಸಂಸ್ಥಾಪನಾ ದಿನ ; ಎನ್‌ಡಿಆರ್‌ಎಫ್ ಸಿಬ್ಬಂದಿ ಕುರಿತು ಪ್ರಧಾನಿ ಶ್ಲಾಘನೆ
4. ಭಾರತ ಮುಕ್ತ ಬ್ಯಾಡ್ಮಿಂಟನ್ ; ಡೆನ್ಮಾರ್ಕ್‌ನ ವಿಕ್ಟರ್ ಆಕ್ಸಾಸೇನ್‌ಗೆ ಪುರುಷರ ಸಿಂಗಲ್ಸ್ ಪ್ರಶಸ್ತಿ
5. ಐಸಿಸಿ ೧೯ ವರ್ಷದೊಳಗಿನ ಮಹಿಳೆಯರ ಟಿ-೨೦ ಕ್ರಿಕೆಟ್ ; ವೆಸ್ಟ್ ಇಂಡೀಸ್ ವಿರುದ್ಧ ಭಾರತಕ್ಕೆ ೯ ವಿಕೆಟ್‌ಗಳ ಭರ್ಜರಿ ಜಯ

<><><><>

ಸಂವಿಧಾನ ರಚನಾಕಾರರ ಚಿಂತನೆಗಳಿಂದ ಸ್ಫೂರ್ತಿ ಪಡೆದು, ಶ್ರೇಷ್ಠ ಭಾರತ ನಿರ್ಮಾಣದೆಡೆಗೆ ಕಾರ್ಯಪ್ರವೃತ್ತರಾಗಲು ದೇಶವಾಸಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಇಂದು ತಮ್ಮ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದ ೧೧೮ನೇ ಆವೃತ್ತಿಯಲ್ಲಿ ದೇಶ-ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಿದ ಅವರು, ಸಂವಿಧಾನ ಜಾರಿಗೊಂಡ ಸ್ಮರಣಾರ್ಥ ಆಚರಿಸಲಾಗುವ ಗಣರಾಜ್ಯೋತ್ಸವ ದಿನದ ೭೫ನೇ ವರ್ಷಾಚರಣೆಯ ಶುಭಾಶಯ ಕೋರಿದರು. ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳ ಏಕತೆಯ ಮಹಾಕುಂಭವಾಗಿದೆ. ಈ ಉತ್ಸವ ವಿವಿಧತೆಯಲ್ಲಿ ಏಕತೆಯನ್ನು ಆಚರಿಸುತ್ತಿದೆ. ಈ ಬಾರಿ ಕುಂಭದಲ್ಲಿ ಯುವಕರ ಪಾಲ್ಗೊಳ್ಳುವಿಕೆ ಬಹಳ ವ್ಯಾಪಕವಾಗಿದೆ ಯುವಕರು ಮೂಲ ಪಾರಂಪರಿಕ ಆಚರಣೆಗಳಲ್ಲಿ ಪಾಲ್ಗೊಂಡರೆ, ಅವರ ಸುವರ್ಣ ಭವಿಷ್ಯ ರೂಪುಗೊಳ್ಳುತ್ತದೆ. ಕುಂಭದ ಈ ಜಾಗತಿಕ ಜನಪ್ರಿಯತೆಯು ಪ್ರತಿಯೊಬ್ಬ ಭಾರತೀಯನಿಗೂ ಹೆಮ್ಮೆಯ ವಿಷಯವಾಗಿದೆ ಎಂದರು. ಭಾರತದ

ಬಾಹ್ಯಾಕಾಶ ಕ್ಷೇತ್ರದಲ್ಲಿ ಅನೇಕ ಐತಿಹಾಸಿಕ ಸಾಧನೆಗಳ ಕುರಿತು ಮಾತನಾಡಿದ ಅವರು, ಕರ್ನಾಟಕದ ಬೆಂಗಳೂರು ಮೂಲದ ಪಿಕ್ಸೆಲ್, ಭಾರತೀಯ ಬಾಹ್ಯಾಕಾಶ-ತಂತ್ರಜ್ಞಾನದ ಸ್ಟಾರ್ಟ್-ಅಪ್, ಭಾರತದ ಮೊದಲ ಖಾಸಗಿ ಉಪಗ್ರಹ ಸಮೂಹ - 'ಫೈರ್ಫ್ಲೈ' ಅನ್ನು ಯಶಸ್ವಿಯಾಗಿ ಉಡಾಯಿಸಿದ ವಿಷಯ ಹಂಚಿಕೊಂಡರು. ಇನ್ನು, ಉಪಗ್ರಹಗಳ ಸ್ಪೇಸ್ ಡಾಕಿಂಗ್ ಸಾಧನೆ ಬಗ್ಗೆ ಹೆಮ್ಮೆ ವ್ಯಕ್ತಪಡಿಸಿದ ಅವರು, ಈ ಸಾಧನೆ ಮಾಡಿದ ನಾಲ್ಕನೇ ರಾಷ್ಟ್ರ ಎಂಬ ಹೆಗ್ಗಳಿಕೆ ಭಾರತಕ್ಕೆ ಲಭಿಸಿದೆ ಎಂದು ನುಡಿದರು. ಸ್ಟಾರ್ಟ್‌ಅಪ್ ಇಂಡಿಯಾ ಉಪಕ್ರಮಕ್ಕೆ ೯ ವರ್ಷಗಳು ಪೂರ್ಣಗೊಂಡಿವೆ ಎಂದು ಹರ್ಷವ್ಯಕ್ತಪಡಿಸಿದ ಅವರು, ಅಂಬಾಲ, ಹಿಸಾರ್, ಕಾಂಗ್ರಾ, ಚೆಂಗಲ್ಪಟ್ಟು, ಬಿಲಾಸ್ಪುರ್, ಗ್ವಾಲಿಯರ್ ಮತ್ತು ವಾಶಿಮ್ ನಂತಹ ನಗರಗಳು ನವೋದ್ಯಮಗಳ ಕೇಂದ್ರಗಳಾಗುತ್ತಿವೆ ಎಂದು ಹೇಳಿದರು.

**ಧ್ವನಿ: ಪ್ರಧಾನಿ ಮೋದಿ**

ಅರುಣಾಚಲ ಪ್ರದೇಶದಲ್ಲಿ ದೀಪಕ್ ನಾಬಾಮ್ ನಡೆಸುವ ಮಾನಸಿಕ ಅಸ್ವಸ್ಥರಿಗೆ, ಶಾರೀರಿಕವಾಗಿ ಅಸಮರ್ಥರಾಗಿರುವವರಿಗೆ ಮತ್ತು ವೃದ್ಧರಿಗೆ ಆರೈಕಾ ಕೇಂದ್ರ ಲಿವಿಂಗ್-ಹೋಮ್, ಲಕ್ಷದ್ವೀಪದಲ್ಲಿರುವ ಕೆಜೀ ಮೊಹಮ್ಮದ್, ನಿಕೋಬಾರ್ ಜಿಲ್ಲೆಯಲ್ಲಿ ವರ್ಜಿನ್ ಕೊಬ್ಬರಿ ಎಣ್ಣೆಗೆ ದೊರೆತಿರುವ ಜಿಐ ಟ್ಯಾಗ್ ಕುರಿತು ಕೇಳುಗರಿಗೆ ಮನದ ಮಾತಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಮಾಹಿತಿ ನೀಡಿದರು.

<><><><>

ಹಮಾಸ್ ಜೊತೆಗಿನ ಗಾಜಾ ಕದನ ವಿರಾಮ ಒಪ್ಪಂದಕ್ಕೆ ಸದ್ಯ ಇಸ್ರೇಲ್ ತಡೆಹಿಡಿದಿದೆ. ಹಮಾಸ್ ಬಿಡುಗಡೆ ಮಾಡಲು ಯೋಜಿಸಿರುವ ಮೊದಲ ಪಟ್ಟಿಯಲ್ಲಿರುವ ಒತ್ತೆಯಾಳುಗಳ ಹೆಸರುಗಳನ್ನು ಒದಗಿಸುವವರೆಗೆ ಕದನ ವಿರಾಮ ಜಾರಿಗೆ ಬರುವುದಿಲ್ಲ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ. ಮತ್ತೊಂದೆಡೆ, ತಾಂತ್ರಿಕ ಕಾರಣಗಳಿಂದಾಗಿ ಪಟ್ಟಿ ಬಿಡುಗಡೆ ವಿಳಂಬವಾಗಿದೆ ಎಂದು ಹಮಾಸ್ ಹೇಳುತ್ತಿದೆ. ಆದರೆ, ಕದನ ವಿರಾಮ ಒಪ್ಪಂದದ ಪ್ರಕಾರ, ಕನಿಷ್ಠ ೨೪ ಗಂಟೆಗಳ ಮೊದಲು ಒತ್ತೆಯಾಳುಗಳ ಹೆಸರುಗಳನ್ನು ಒದಗಿಸಬೇಕು ಎಂದು ಇಸ್ರೇಲ್ ಹೇಳಿದೆ. ಇದೇ ವೇಳೆ, ಗಾಜಾ ಕದನ ವಿರಾಮ ಒಪ್ಪಂದ ಮುರಿದುಬಿದ್ದ ಹಿನ್ನೆಲೆಯಲ್ಲಿ ಇಸ್ರೇಲ್‌ಗೆ ಅಮೆರಿಕ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದಾರೆ. ಸಂದರ್ಶನವೊಂದರಲ್ಲಿ

ಮಾತನಾಡಿದ ಟ್ರಂಪ್, ಇಸ್ರೇಲ್ ಮತ್ತು ಹಮಾಸ್ ನಡುವಿನ ಯುದ್ಧ ಕೊನೆಗೊಳ್ಳುವುದನ್ನು ಎದುರು ನೋಡುತ್ತಿದ್ದೇನೆ ಎಂದು ಹೇಳಿದರು. ಎರಡೂ ಕಡೆಯವರು ಕದನ ವಿರಾಮ, ಒತ್ತೆಯಾಳುಗಳ ಒಪ್ಪಂದವನ್ನು ಎತ್ತಿ ಹಿಡಿಯದಿದ್ದರೆ ಸಮಸ್ಯೆ ಮತ್ತಷ್ಟು ಬಿಗಡಾಯಿಸಲಿದೆ ಎಂದು ಎಚ್ಚರಿಸಿದರು. ಶಾಂತಿ ಪಾಲನೆಯನ್ನು ಅಮೆರಿಕ ಕೋರುತ್ತದೆ. ಆದರೆ ಅದನ್ನು ಪಾಲಿಸದಿದ್ದರೆ ಪರಿಣಾಮಗಳ ಬಗ್ಗೆ ಎಚ್ಚರಿಕೆಯನ್ನು ಸಹ ನೀಡುತ್ತದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

<><><><>

ಇಂದು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ - ಎನ್‌ಡಿಆರ್‌ಎಫ್ ಸಂಸ್ಥಾಪನಾ ದಿನ. ಈ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಎನ್‌ಡಿಆರ್‌ಎಫ್‌ನ ಧೈರ್ಯಶಾಲಿ ಸಿಬ್ಬಂದಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಎನ್‌ಡಿಆರ್‌ಎಫ್‌ನ ಸಿಬ್ಬಂದಿಯ ಧೈರ್ಯ, ಸಮರ್ಪಣೆ ಮತ್ತು ನಿಸ್ವಾರ್ಥ ಸೇವೆಯನ್ನು ಶ್ಲಾಘಿಸಿರುವ ಪ್ರಧಾನಿ ಮೋದಿ ಅವರು, ಜೀವಗಳನ್ನು ಉಳಿಸುವಲ್ಲಿ, ವಿಪತ್ತುಗಳಿಗೆ ಪ್ರತಿಕ್ರಿಯಿಸುವಲ್ಲಿ ಮತ್ತು ತುರ್ತು ಪರಿಸ್ಥಿತಿಗಳಲ್ಲಿ ಸುರಕ್ಷತೆಯನ್ನು ಖಾತರಿಪಡಿಸುವಲ್ಲಿ ಎನ್‌ಡಿಆರ್‌ಎಫ್ ಸಿಬ್ಬಂದಿಯ ಅಚಲ ಬದ್ಧತೆ ನಿಜಕ್ಕೂ ಶ್ಲಾಘನೀಯ ಎಂದರು. ವಿಪತ್ತು ಪ್ರತಿಕ್ರಿಯೆ ಮತ್ತು ನಿರ್ವಹಣೆಯಲ್ಲಿ ಎನ್‌ಡಿಆರ್‌ಎಫ್ ಜಾಗತಿಕ ಮಾನದಂಡಗಳನ್ನು ನಿಗದಿಪಡಿಸಿದೆ ಎಂದು ಸಾಮಾಜಿಕ ಜಾಲತಾಣ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

<><><><>

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನ ಮಹಾಕುಂಭಮೇಳದ ಸೆಕ್ಟರ್ ೧೯ರಲ್ಲಿ ಇಂದು ಬೆಂಕಿ ಕಾಣಿಸಿಕೊಂಡಿದ್ದು, ಬೆಂಕಿಯನ್ನು ಶೀಘ್ರದಲ್ಲೇ ನಿಯಂತ್ರಣಕ್ಕೆ ತರಲಾಗಿದೆ. ಟೆಂಟ್‌ನಲ್ಲಿ ಆಹಾರ ತಯಾರಿಸುತ್ತಿದ್ದ ವೇಳೆ ಬೆಂಕಿ ಕಾಣಿಸಿಕೊಂಡಿದೆ. ಬೆಂಕಿ ಅವಘಡದಲ್ಲಿ ಒಬ್ಬ ವ್ಯಕ್ತಿ ಗಾಯಗೊಂಡಿದ್ದು, ಆತನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಬೆಂಕಿ ಕಾಣಿಸಿಕೊಂಡ ಬಗ್ಗೆ ಜಿಲ್ಲಾಡಳಿತಕ್ಕೆ ಮಾಹಿತಿ ಸಿಕ್ಕ ಕೂಡಲೇ, ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ತೆರಳಿ ಬೆಂಕಿಯನ್ನು ನಂದಿಸಿದ್ದಾರೆ. ಮಹಾಕುಂಭಮೇಳ ಪ್ರದೇಶ ಈಗ ಸಹಜ ಸ್ಥಿತಿಗೆ ಮರಳಿದೆ ಎಂದು ಸ್ಥಳೀಯ ಆಡಳಿತ ತಿಳಿಸಿದೆ.

<><><><>

ನಟ ಸೈಫ್ ಅಲಿ ಖಾನ್ ಮೇಲಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹಾರಾಷ್ಟ್ರದ ಥಾಣೆಯಿಂದ ಮೊಹಮ್ಮದ್ ಶರೀಫುಲ್ ಇಸ್ಲಾಂ ಶಹಜಾದ್ ಎಂಬ ವ್ಯಕ್ತಿಯನ್ನು ಬಂಧಿಸಲಾಗಿದೆ

ಎಂದು ಮುಂಬೈ ಪೊಲೀಸರು ತಿಳಿಸಿದ್ದಾರೆ. ಈ ವ್ಯಕ್ತಿ ಮೂಲತಃ ಬಾಂಗ್ಲಾದೇಶದವನಾಗಿರಬಹುದು ಎಂದು ಪೊಲೀಸರು ಸಂಶಯ ವ್ಯಕ್ತಪಡಿಸಿದ್ದಾರೆ. ಆರೋಪಿ ಬಾಂಗ್ಲಾದೇಶದವನು ಎಂಬುದಕ್ಕೆ ಪ್ರಾಥಮಿಕ ಪುರಾವೆಗಳಿವೆ. ಆರೋಪಿಯನ್ನು ಬಾಂದ್ರಾ ರಜಾ ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದು, ನ್ಯಾಯಾಲಯವು ಆರೋಪಿಯನ್ನು ೫ ದಿನಗಳ ಕಾಲ ಪೊಲೀಸ್ ವಶಕ್ಕೆ ಒಪ್ಪಿಸಿದೆ ಎಂದು ಮುಂಬೈ ಅಪರಾಧ ವಿಭಾಗದ ಡಿಸಿಪಿ ದೀಕ್ಷಿತ್ ಗೆದಮ್ ತಿಳಿಸಿದ್ದಾರೆ.

<><><><>

ನೌಕರ ಭವಿಷ್ಯ ನಿಧಿ ಸಂಸ್ಥೆ - ಇಪಿಎಫ್‌ಒ, ಸದಸ್ಯರ ಪ್ರೊಫೈಲ್‌ಗಳನ್ನು ನವೀಕರಿಸುವ ಆನ್‌ಲೈನ್ ಪ್ರಕ್ರಿಯೆಯನ್ನು ಸರಳಗೊಳಿಸಿದೆ. ಆಧಾರ್ ಮೂಲಕ ಸಾರ್ವತ್ರಿಕ ಖಾತೆ ಸಂಖ್ಯೆಯನ್ನು ಈಗಾಗಲೇ ಅಪ್‌ಡೇಟ್ ಮಾಡಿರುವ ಸದಸ್ಯರು, ಯಾವುದೇ ದಾಖಲೆಗಳನ್ನು ಅಪ್‌ಲೋಡ್ ಮಾಡುವ ಅಗತ್ಯವಿಲ್ಲದೇ ತಮ್ಮ ಪ್ರೊಫೈಲ್ ಅನ್ನು ಹೆಸರು, ಹುಟ್ಟಿದ ದಿನಾಂಕ, ಲಿಂಗ, ರಾಷ್ಟ್ರೀಯತೆ, ತಂದೆ ಅಥವಾ ತಾಯಿಯ ಹೆಸರು ಮತ್ತು ಸೇರಿದ ದಿನಾಂಕವನ್ನು ನವೀಕರಿಸಬಹುದಾಗಿದೆ ಎಂದು ಇಪಿಎಫ್‌ಒ ತಿಳಿಸಿದೆ.

<><><><>

ಭಾರತ್ ಮೊಬಿಲಿಟಿ ಗ್ಲೋಬಲ್ ಎಕ್ಸ್‌ಪೊ - ೨೦೨೫ರಲ್ಲಿ ನವದೆಹಲಿಯ ಭಾರತ್ ಮಂಟಪಂನಲ್ಲಿ ೨೨ ವಿಭಿನ್ನ ಬ್ರ್ಯಾಂಡ್‌ಗಳಿಂದ ೫೬ ಹೊಸ ಉತ್ಪನ್ನಗಳು ಬಿಡುಗಡೆಯಾಗಿವೆ. ಸೂಪರ್ ಬೈಕ್‌ಗಳು, ಕಾರುಗಳು, ಬಸ್‌ಗಳು ಮತ್ತು ಆಂಬ್ಯೂಲೆನ್ಸ್‌ಗಳಿಂದ ಹಿಡಿದು ವಿವಿಧ ಸುಧಾರಿತ ವಾಹನಗಳನ್ನು ಇಲ್ಲಿ ಪ್ರದರ್ಶಿಸಲಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರು, ಜನವರಿ ೧೭ ರಂದು ಭಾರತ್ ಮೊಬಿಲಿಟಿ ಗ್ಲೋಬಲ್ ಎಕ್ಸ್‌ಪೊ ಗೆ ಚಾಲನೆ ನೀಡಿದ್ದರು. ಒಟ್ಟು ೬ ದಿನಗಳ ಕಾಲ ನವದೆಹಲಿಯ ಭಾರತ್ ಮಂಟಪಂ ಮತ್ತು ಯಶೋಭೂಮಿ ಹಾಗೂ ಗ್ರೇಟರ್ ನೋಯ್ಡಾದ ಇಂಡಿಯಾ ಎಕ್ಸ್‌ಪೊ ಸೆಂಟರ್ ಮತ್ತು ಮಾರ್ಟ್‌ನಲ್ಲಿ ಈ ಎಕ್ಸ್‌ಪೊ ನಡೆಯುತ್ತಿದೆ.

<><><><>

ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಸ್ವಿಟ್ಜರ್ಲೆಂಡ್‌ನ ದಾವೋಸ್‌ನಲ್ಲಿ ನಾಳೆಯಿಂದ ಪ್ರಾರಂಭವಾಗುವ ವಿಶ್ವ ಆರ್ಥಿಕ ವೇದಿಕೆ ೨೦೨೫ರಲ್ಲಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು, ದೇಶದ ಅಭಿವೃದ್ಧಿ ಮಾದರಿಗಳ ಕುರಿತು ಪ್ರಸ್ತಾಪಿಸಲಿದ್ದಾರೆ. ತಮ್ಮ

ಭೇಟಿಗೆ ಮುನ್ನ ಮಾತನಾಡಿದ ಸಚಿವರು, ಸಮಾಜದ ಎಲ್ಲಾ ವರ್ಗಗಳಿಗೆ, ವಿಶೇಷವಾಗಿ ಬಹಳ ಕಾಲದಿಂದಲೂ ಅಭಿವೃದ್ಧಿಯಿಂದ ಹೊರಗುಳಿದವರಿಗೆ ಅಭಿವೃದ್ಧಿಯನ್ನು ಖಾತ್ರಿಪಡಿಸುವಲ್ಲಿ ದೇಶದ ಮಹತ್ವದ ದಾಪುಗಾಲುಗಳನ್ನು ಒತ್ತಿ ಹೇಳಿದರು. ಐದು ದಿನಗಳ ಸಮಾರಂಭದಲ್ಲಿ ಅಂತರ್ಗತ ಬೆಳವಣಿಗೆ, ಸಾಮಾಜಿಕ, ಭೌತಿಕ ಮತ್ತು ಡಿಜಿಟಲ್ ಮೂಲಸೌಕರ್ಯದಲ್ಲಿ ಹೂಡಿಕೆ ಮತ್ತು ತಂತ್ರಜ್ಞಾನವನ್ನು ಸಮಗ್ರಗೊಳಿಸುವ ಬಗ್ಗೆ ವಿವರವಾದ ಚರ್ಚೆ ನಡೆಯಲಿದೆ ಎಂದು ಹೇಳಿದರು.

<><><>

ನವದೆಹಲಿಯಲ್ಲಿ ನಡೆದ ಭಾರತ ಮುಕ್ತ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಡೆನ್ಮಾರ್ಕ್‌ನ ವಿಕ್ಟರ್ ಆಕ್ಸಾಸೇನ್ ಪ್ರಶಸ್ತಿ ಮುಡಿಗೇರಿಸಿಕೊಂಡಿದ್ದಾರೆ. ಅವರು, ಇಂದು ನಡೆದ ಫೈನಲ್‌ನಲ್ಲಿ ಹಾಂಕ್‌ಗಾಂಗ್‌ನ ಸಿ. ಯಿಯು ಲೀ ಅವರನ್ನು ೨೧-೧೬, ೨೧-೮ ನೇರ ಸೆಟ್‌ಗಳಿಂದ ಪರಾಭವಗೊಳಿಸಿದರು. ಇದೇ ವೇಳೆ ಮಹಿಳೆಯರ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿ ಥೈಲ್ಯಾಂಡ್‌ನ ಪಿ ಚೊಚುವಾಂಗ್ ಅವರನ್ನು ೨೧-೧೨, ೨೧-೯ ಸೆಟ್‌ಗಳಿಂದ ಸೋಲಿಸಿ, ದಕ್ಷಿಣ ಕೋರಿಯಾದ ಆನ್ ಸೆ ಯೆಂಗ್ ಪ್ರಶಸ್ತಿ ವಿಜೇತರಾಗಿದ್ದಾರೆ.

<><><>

ಕೌಲಾಲಂಪುರದ ಬಾಯಿಮಾಸ್ ಓವಲ್ ಕ್ರೀಡಾಂಗಣದಲ್ಲಿ ಇಂದು ನಡೆದ ಐಸಿಸಿ ೧೯ ವರ್ಷದೊಳಗಿನ ಮಹಿಳೆಯರ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ತಂಡದ ವಿರುದ್ಧ ಭಾರತ ೯ ವಿಕೆಟ್‌ಗಳಿಂದ ಭರ್ಜರಿ ಜಯ ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ವೆಸ್ಟ್ ಇಂಡೀಸ್ ವನಿತಾ ತಂಡ, ೧೩.೨ ಓವರ್‌ಗಳಲ್ಲಿ ೪೪ ರನ್‌ಗಳಿಗೆ ಎಲ್ಲ ವಿಕೆಟ್‌ಗಳನ್ನು ಕಳೆದುಕೊಂಡಿತು. ಭಾರತ ಪರ ಪರುಣಿಕಾ ಸಿಸೋಡಿಯಾ ೩ ವಿಕೆಟ್ ಪಡೆದರೆ, ಜೋಶಿತಾ ಮತ್ತು ಅಯುಶಿ ಶುಕ್ಲ ತಲಾ ೨ ವಿಕೆಟ್ ಕಬಳಿಸಿದರು. ಈ ಅಲ್ಪ ಗುರಿಯನ್ನು ಬೆನ್ನತ್ತಿದ ಭಾರತ ವನಿತಾ ತಂಡ, ಕೇವಲ ೪.೨ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೪೭ ರನ್ ಗಳಿಸಿ ಗೆಲುವಿನ ನಗೆ ಬೀರಿತು.

<><><>

ನವದೆಹಲಿಯ ಇಂದಿರಾಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಖೋ ಖೋ ವಿಶ್ವಕಪ್ ೨೦೨೫ ಪಂದ್ಯಾವಳಿಯ ಮಹಿಳೆಯರ ವಿಭಾಗದ ಫೈನಲ್‌ನಲ್ಲಿ ಭಾರತ ಮತ್ತು ನೇಪಾಳ ತಂಡಗಳು ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ. ಇದೇ ವೇಳೆ, ಖೋ ಖೋ

ವಿಶ್ವಕಪ್ ೨೦೨೫ ಪಂದ್ಯಾವಳಿಯ ಪುರುಷರ ವಿಭಾಗದ ಫೈನಲ್‌ನಲ್ಲಿ ಭಾರತ ತಂಡವು, ನೇಪಾಳ ತಂಡವನ್ನು ಎದುರಿಸಲಿದ್ದು, ಪಂದ್ಯ ರಾತ್ರಿ ೮.೧೫ ಕ್ಕೆ ಪ್ರಾರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>